# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1279
ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾಗಿದ್ದ ದಿನಾಂಕ : 8-03-2022
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದ ಯೋಜನೆಗಳಿಗೆ ಮತ್ತು ಫಲಾನುಭವಿ ಆಯ್ಕೆ ಸಮಿತಿಗೆ ವಿಧಾನ ಪರಿಷತ್ತಿನ ಸದಸ್ಯರು ಸಹ ಅಧ್ಯಕ್ಷರಾಗಿರುತ್ತಾರೆಂಬ ಸರ್ಕಾರದ ಸುತ್ತೋಲೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ಸರ್ಕಾರದ ಅ.ಸ. ಪತ್ರ ಸಂಖ್ಯೆ:ಸಿಆಸುಇ 40 ಹೆಚ್.ಪಿ.ಎ. 2018, ದಿನಾಂಕ:10.01.2019ರಲ್ಲಿನ ವಿಷಯವು ತಾಲ್ಲೂಕುಮಟ್ಟದ ಸಮಿತಿಗೆ ಸಂಬಂಧಿಸಿರುತ್ತದೆ. |
| ಆ) | ಹಾಗಿದ್ದಲ್ಲಿ, ಈ ಯೋಜನೆಗೆ ವಿಧಾನ ಪರಿಷತ್ತಿನ ಸದಸ್ಯರು ಸಮಿತಿಯ ಸದಸ್ಯರಾಗಿರುವುದಿಲ್ಲವೆಂದು ಸರ್ಕಾರ ಉತ್ತರ ನೀಡಿರುವುದಕ್ಕೆ ಕಾರಣವೇನು; | ಮಾನ್ಯ ಮುಖ್ಯಮಂತ್ರಿಯವರ ನಗರೋತ್ಥಾನ 4ರ ಯೋಜನೆಯ ಮಾರ್ಗಸೂಚಿಯಲ್ಲಿ ತಾಲ್ಲೂಕುಮಟ್ಟದ ಸಮಿತಿಯನ್ನು ರಚಿಸಿರುವುದಿಲ್ಲ. |
| ಇ) | ಕಳೆದ ನಗರೋತ್ಥಾನ-3 ರಲ್ಲಿ ಅವ್ಯವಹಾರ ನಡೆದಿದ್ದು, ಕಳಪೆ ಮಟ್ಟದ ಕಾಮಗಾರಿಗಳು ಇನ್ನು ಕೂಡ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೀದರ್ ಜಿಲ್ಲೆಯ 7 ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಗರೋತ್ಥಾನ-3ನೇ ಹಂತದ ಯೋಜನೆಯಡಿ ಯಾವುದೇ ಅವ್ಯವಹಾರ ನಡೆದಿರುವ ಬಗ್ಗೆ ಯಾವುದೇ ಪ್ರಕರಣ ದಾಖಲಾಗಿರುವುದಿಲ್ಲ. ನಗರೋತ್ಥಾನ ಯೋಜನೆಯಡಿ ಗುಣಮಟ್ಟದ ಕಾಮಗಾರಿಗಳನ್ನು ನಿರ್ವಹಿಸಲಾಗಿರುತ್ತದೆ. |
| ಈ) | ಬಂದಿದ್ದಲ್ಲಿ, ಕಳಪೆ ಹಾಗೂ ವಿಳಂಬ ಮಾಡುತ್ತಿರುವ ಗುತ್ತಿಗೆದಾರರ ಹಾಗೂ ಅಧಿಕಾರಿಗಳ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು? | ನಗರೋತ್ಥಾನ (ಮುನಿಸಿಪಾಲಿಟಿ)-3ನೇ ಹಂತದ ಯೋಜನೆಯಡಿ ಗುಣಮಟ್ಟದ ಕಾಮಗಾರಿಗಳನ್ನು ನಿರ್ವಹಿಸಲಾಗಿದ್ದು, ಕಳಪೆ ಕಾಮಗಾರಿಗಳನ್ನು ನಿರ್ವಹಿಸಿರುವುದಿಲ್ಲ. ಸದರಿ ಕಾಮಗಾರಿಗಳನ್ನು ಸಕಾಲದಲ್ಲಿ ಹಾಗೂ ಗುತ್ತಿಗೆ ಅವಧಿಯೊಳಗೆ ಪೂರ್ಣಗೊಳಿಸದಿದ್ದ ಪಕ್ಷದಲ್ಲಿ ಗುತ್ತಿಗೆದಾರರ ಬಿಲ್ಲಿನ ಮೊತ್ತದಲ್ಲಿ ಶೇ.10 ರಷ್ಟು ಮೊತ್ತವನ್ನು ತಡೆಹಿಡಿಯಲು ಕ್ರಮವಹಿಸಲಾಗುವುದು ಹಾಗೂ ನಿಯಮಾನುಸಾರ ಸೂಕ್ತ ದಂಡ ವಿಧಿಸಲಾಗುವುದು. |

ಕಡತ ಸಂಖ್ಯೆ:ನಅಇ 41 ಸಮಸ 2022

(ಎನ್. ನಾಗರಾಜು (ಎಂ.ಟಿ.ಬಿ))
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು